**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ ಉತ್ತರ ಕನ್ನಡ : ಕಾರವಾರ**

**ಸ್ಪೆಷಲ್ ಕೇಸ್ ನಂ. 3/2010**

**ದೋ.ಸಾ. :65 ಪ್ರಾ.ಸಾ. : 26**

| | |
|---|---|
| ಸಾಕ್ಷಿಯ ಹೆಸರು | : ವಸಂತ್ ಈಶ್ವರ ನಾಯ್ಕ |
| ತಂದೆಯ ಹೆಸರು | : ಈಶ್ವರ ನಾಯ್ಕ |
| ವಯಸ್ಸು | : 52 ವರ್ಷ |
| ಉದ್ಯೋಗ | : ಕೂಲಿ |
| ವಾಸ | : ಕಾನಗೋಡ, ಸಿದ್ದಾಪುರ ತಾಲೂಕು. |

**ದಿನಾಂಕಃ 24-08-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಿಶೇಷ ಸರಕಾರಿ ಅಭಿಯೋಜಕರಿಂದ**

1. ನಾನು ಕಾನಗೋಡ ಗ್ರಾಮದಲ್ಲಿ ಹುಟ್ಟಿದಾಗಿನಿಂದ ವಾಸ ಇದ್ದೇನೆ. ಆರೋಪಿ ನನಗೆ ಪರಿಚಯ ಇದ್ದಾನೆ. ಆರೋಪಿ ಗ್ರಾಮ ಪಂಚಾಯತಿ ಅಧ್ಯಕ್ಷ ಆಗಿದ್ದ. 2001-02 ರಲ್ಲಿ ಗ್ರಾಮ ಪಂಚಾಯತಿಯಿಂದ ಸರ್ಕಾರದ ಮೂಲಕ ಸ್ವಚ್ಚ ಗ್ರಾಮ ಯೋಜನೆ ಬಂದಿತ್ತು. ಅದರಲ್ಲಿ ಸರ್ಕಾರ ರೂ.20 ಲಕ್ಷ ಹಣ ಮಂಜೂರು ಮಾಡಿತ್ತು ಎಂದರೆ ನನಗೆ ಗೊತ್ತಿಲ್ಲ. ಆ ಯೋಜನೆ ಅಡಿಯಲ್ಲಿ 210 ಫಲಾನುಭವಿಗಳನ್ನು ಗುರುತಿಸಿದ್ದರು ಎಂದರೆ ಗೊತ್ತಿಲ್ಲ. ನನ್ನ ತಂದೆ ಒಬ್ಬ ಫಲಾನುಭವಿಯಾಗಿ ಆಯ್ಕೆ ಆಗಿದ್ದರು. ಅವರಿಗೆ ಯೋಜನೆ ಅಡಿಯಲ್ಲಿ ಹಣ ಕೊಟ್ಟರಾ ಎಂದು ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಮಾನ್ಯ ಅಭಿಯೋಜಕರು ಅನುಮತಿಯನ್ನು ಕೇಳುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಗಮನಿಸಿ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ವಿಶೇಷ ಸರಕಾರಿ ಅಭಿಯೋಜಕರಿಂದ**

2. ಸ್ವಚ್ಚ ಗ್ರಾಮ ಯೋಜನೆ ಅಡಿಯಲ್ಲಿ ನಾನು ಫಲಾನುಭವಿಯಾಗಿ ಆಯ್ಕೆ ಆಗಿದ್ದೆ ಮತ್ತು ನನಗೆ ರೂ.3000/- ಕೊಡಬೇಕಾಗಿತ್ತು ಮತ್ತು ಅದನ್ನು ಕೊಟ್ಟಿಲ್ಲ ಹಾಗೂ ಶೌಚಾಲಯ ಸಹ ನಿರ್ಮಿಸಿ ಕೊಟ್ಟಿಲ್ಲ ಎಂದು ನಾನು ಪೊಲೀಸ ನವರಿಗೆ ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ.

ನಿಪಿ–62 ರಂತೆ ನಾನು ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ನಾನು ಆರೋಪಿಯನ್ನು ಬಚಾವು ಮಾಡುವುದಕ್ಕಾಗಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಜಿ ಟಿ ಎನ್ ರವರಿಂದ**

ಪಾಟಿ ಸವಾಲು ಏನೂ ಇಲ್ಲ ಎಂದು ಹೇಳಿದ್ದಾರೆ.

**ಮರು ವಿಚಾರಣೆಃ – ಇಲ್ಲ –**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ)

ಓ.ಹೇ.ಕೇ.ಸ.ಇ.

(ಡಿ.ಎಸ್. ವಿಜಯಕುಮಾರ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ , ಕಾರವಾರ